ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 10/03/2020

# ಕನ್ನಡ ಉಳಿಸಿ, ಬೆಳೆಸಿ: ಕಾಗೇರಿ



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಾನೂನು ಕನ್ನಡ ಪುಸ್ತಕವನ್ನು ವಿಧಾನಸಭೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಬಿಡುಗಡೆ ಮಾಡಿದರು. ಸಚಿವ ಜೆ.ಸಿ.ಮಾಧುಸ್ವಾಮಿ, ಸ.ಟಿ.ರವಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಸ್.ನಾಗಾಭರಣ ಇದ್ದರು.

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮಾತೃಭಾಷೆ ಎಂಬುದು ಅಕ್ಷರಗಳ ಜೋಡಣೆ ಅಲ್ಲ, ಅದು ನಮ್ಮ ಸಂಸ್ಕೃತಿ ಬಿಂಬಿಸುವ ಪ್ರತೀಕ ಎಂದು ವಿಧಾನ ಸಭಾಧ್ಯಕ್ಷ ವಿಶ್ವೇಶ್ವರಹೆಗಡೆ ಕಾಗೇರಿ ತಿಳಿಸಿದರು.

ವಿಕಾಸಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಾನೂನು ಇಲಾಖೆ ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಆಯೋಸಲಾಗಿದ್ದ ಕಾರ್ಯಕ್ರಮದಲ್ಲಿ ಕಾನೂನು ಕನ್ನಡ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದರು. ಮಾತೃಭಾಷೆಗ ಅಗಾಧವಾದ ಶಕ್ತಿ ಇದ್ದು, ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರಲ್ಲೂ ಇರಬೇಕು. ಆ ಕೆಲಸವಾದಾಗ ಮತ್ತಷ್ಟು ಶಕ್ತಿ ಬರಲಿದೆ ಎಂದು ತಿಳಿಸಿದರು.

ವ್ಯವಹಾರಿಕ ದೃಷ್ಟಿಯಿಂದ ಎಲ್ಲ ಭಾಷೆಗಳನ್ನು ಕಲಿಯುವುದು ಅಗತ್ಯ. ಆದರೆ ಸಮೃದ್ಧ ಮಾತೃಭಾಷೆ ಅಳಿಯಲು ಬಿಡಬಾರದು. ಕಾನೂನಿನ ಅರಿವು ಪ್ರತಿಯೊಬ್ಬರಿಗೂ ಅಗತ್ಯ. ಕಾನೂನು ಕುರಿತ ಅಜ್ಞಾನ ಕ್ಷಮಾರ್ಹವಲ್ಲ. ಪ್ರಾಧಿಕಾರ ಹೊರ ತಂದಿರುವ ಕಾನೂನು ಕನ್ನಡ ಪುಸ್ತಕ ಕಾನೂನಿನ ಬಗ್ಗೆ ಅರಿವು ಮೂಡಿಸಲು ಸಹಕಾರಿಯಾಗಿದೆ ಎಂದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಮಾತನಾಡಿ, ಕಾನೂನಿಗೆ ಸಂಬಂಧಿಸಿದ ಪುಸ್ತಕಗಳನ್ನು ಕನ್ನಡದಲ್ಲಿ ಹೊರ ತರಲು ಸರಕಾರ ಎಲ್ಲ ರೀತಿಯ ಪ್ರೋತ್ಸಾಹ ನೀಡುತ್ತಿದೆ. ಓದುವ ಅಭ್ಯಾಸವನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳಬೇಕು. ರಾಷ್ಟ್ರಕವಿ ಕುವೆಂಪು ಸೇರಿ ಹಲವಾರು ಸಾಹಿತಿಗಳು ಮಾತೃಭಾಷೆಯಲ್ಲಿ ಕೃತಿಗಳನ್ನು ರಚಿಸಿದಾಗ ಯಶಸ್ಸು ಕಂಡರು. ಹಾಗಾಗಿ ಮಾತೃಭಾಷೆ ಬಗ್ಗೆ ಪ್ರತಿಯೊಬ್ಬರಿಗೂ ಅಭಿಮಾನ ಇರಬೇಕು ಎಂದರು.

ಸಿ.ಟಿ. ರವಿ ಮಾತನಾಡಿ, ಬಹುಜನರಿಗೆ ಅರ್ಥವಾಗುವ ಮಾತೃಭಾಷೆ ಬಗ್ಗೆ ಎಲ್ಲರಿಗೂ ಅಭಿಮಾನ ಇರಬೇಕು. ಈ ಕೆಲಸ ಮನೆ ಮನೆಯಿಂದಲೇ ಆರಂಭವಾಗಬೇಕು. ಕಾನೂನು, ವೈದ್ಯಕೀಯ ಮುಂತಾದ ಕ್ಷೇತ್ರಗಳ ಜ್ಞಾನ ಉಣಬಡಿಸಲು ಕನ್ನಡದಲ್ಲೇ ಪುಸ್ತಕಗಳು ರಚನೆಯಾಗಬೇಕು ಜತಗೆ ಪ್ರಾದೇಶಿಕ ಭಾಷೆಗಳನ್ನು ಇತ್ತೀಚಿನ ದಿನಗಳಲ್ಲಿ ಅವನತಿಯತ್ತ ಸಾಗುತ್ತಿದ್ದು ಮತ್ತೊಮ್ಮೆ ಸ್ಮೃತೀಕರಣ ಚಳವಳಿ ನಡೆಸಬೇಕಾದ ಅಗತ್ಯವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್.ನಾಗಾಭರಣ, ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿ ಡಾ. ಈಶ್ವರ್‌ಭಟ್ ಇದ್ದರು.